ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/57/ದ್ವಿದಸ/ಬಡ್ತಿ/2018-19/ಬಸ್ಥಾವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ.
ಬೆಂಗಳೂರು. ದಿನಾಂಕ: 4.08.2018

## ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಜ್ಯೇಷ್ಠತೆ ಹಾಗೂ ವಿದ್ಯಾರ್ಹತೆ ಹೊಂದಿರುವ ಅಟೆಂಡರ್‌ಗಳಿಗೆ ದ್ವಿತೀಯ ದರ್ಜೆ ಸಹಾಯಕರಾಗಿ ಸ್ಥಾನಾಪನ್ನ ಬಡ್ತಿ ನೀಡುವ ಬಗ್ಗೆ.

* * * *

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಹಾಲಿ ಜಾರಿಯಲ್ಲಿರುವ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪ್ರಕಾರ, ಶೇಕಡ 33ರ ಅನುಪಾತದಂತೆ ದ್ವಿತೀಯ ದರ್ಜೆ ಸಹಾಯಕರ ಬಡ್ತಿಗೆ ಮೀಸಲಾದ ಹುದ್ದೆಗಳಿಗೆ, ಅಗತ್ಯ ವಿದ್ಯಾರ್ಹತೆ ಹೊಂದಿರುವ ಅಟೆಂಡರ್‌ಗಳಿಂದ ಜ್ಯೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಬಡ್ತಿ ನೀಡಿ ತುಂಬಬೇಕಾಗಿರುತ್ತದೆ. ಈ ಸಂಬಂಧದಲ್ಲಿ ತಮ್ಮ ಕಛೇರಿ/ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿರುವ ಅಟೆಂಡರ್‌ಗಳ ಪೈಕಿ ಎಸ್.ಎಸ್.ಎಲ್.ಸಿ /ಪಿ.ಯು.ಸಿ. ವಿದ್ಯಾರ್ಹತೆ ಹಾಗೂ ಅಕೌಂಟ್ಸ್ ಲೋಯರ್ (ಇಲಾಖಾ ಪರೀಕ್ಷೆ) ತೇರ್ಗಡೆ ಹೊಂದಿರುವ ಅಟೆಂಡರ್‌ಗಳ ಪಟ್ಟಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಸಿದ್ಧಪಡಿಸಿ, ದೃಢೀಕೃತ ಅಂಕಪಟ್ಟಿ ಮತ್ತು ಪ್ರಮಾಣ ಪತ್ರದ ಪ್ರತಿಗಳೊಂದಿಗೆ ಈ ಕಛೇರಿಗೆ ಅತ್ಯಂತ ಜರೂರಾಗಿ ಕಳುಹಿಸಿಕೊಡುವಂತೆ ಹಾಗೂ ಸದರಿ ಅಟೆಂಡರ್‌ಗಳ ವಿರುದ್ಧ ಇಲಾಖಾ ವಿಚಾರಣೆಗಳು/ಶಿಸ್ತುಬದ್ಧ ಕ್ರಮಗಳು/ಕ್ರಿಮಿನಲ್ ಮೊಕದ್ದಮೆಗಳು ಜಾರಿಯಲ್ಲಿವೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ತಮ್ಮ ದೃಢೀಕರಣದೊಂದಿಗೆ ಅಗತ್ಯ ಪ್ರಸ್ತಾವನೆಯನ್ನು 01 ವಾರದೊಳಗೆ ಕಳುಹಿಸಿಕೊಡುವಂತೆ ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ವಿ.ಸೂ.: ಮೇಲ್ಕಂಡ ಮಾಹಿತಿಯನ್ನು ತಮ್ಮ ಕಛೇರಿ/ಕಾಲೇಜಿನ ಅಟೆಂಡರ್‌ಗಳ ಗಮನಕ್ಕೆ ತಪ್ಪದೆ ತರುವುದು.

ಇವರಿಗೆ :

1. ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ – ಜರೂರು ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಜರೂರು ಕ್ರಮಕ್ಕಾಗಿ.
3. ಎಲ್ಲಾ ಅಧಿಕಾರಿಗಳ ಆಪ್ತ ಶಾಖೆ – ಮಾಹಿತಿಗಾಗಿ.
4. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಮ್ಯಾನೇಜರ್/ಅಧೀಕ್ಷಕರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮೇಲ್ಕಂಡ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.

*DCE-57-SDA-Promotion-2018-19.docx*

## ನಮೂನೆ

**ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಎಸ್.ಎಸ್.ಎಲ್.ಸಿ./ಪಿ.ಯು.ಸಿ. ಹಾಗೂ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಅಟೆಂಡರ್‌ಗಳಿಗೆ ದ್ವಿತೀಯ ದರ್ಜೆ ಸಹಾಯಕರಾಗಿ ಸ್ಥಾನಪನ್ನ ಬಡ್ತಿ ನೀಡುವ ಸಂಬಂಧದಲ್ಲಿ ಎಸ್.ಎಸ್.ಎಲ್.ಸಿ/ಪಿ.ಯು.ಸಿ. ವಿದ್ಯಾರ್ಹತೆ ಹೊಂದಿರುವ ಅಟೆಂಡರ್‌ಗಳ ಪಟ್ಟಿ.**

| ಕ್ರ.ಸಂ | ದಿ:30.06.2017 ರಲ್ಲಿದ್ದಂತೆ ಪ್ರಕಟಿಸಿರುವ ಅಟೆಂಡರ್‌ಗಳ ಅಂತಿಮ ಜ್ಯೇಷ್ಠತಾ ಪಟ್ಟಿ ಕ್ರ.ಸಂ/ಹೈ.ಕ. ಜ್ಯೇ.ಪ.ಕ್ರ.ಸಂ | ಹೆಸರು ಶ್ರೀ/ಶ್ರೀಮತಿ | ಜನ್ಮ ದಿನಾಂಕ | ಅಟೆಂಡರ್‌ಗಳಾಗಿ ನೇಮಕಾತಿಗೊಂಡ/ ಬಡ್ತಿ ಹೊಂದಿದ ದಿನಾಂಕ | ಸೇವಾ ಪೂರ್ವ ಅವಧಿ ಘೋಷಣೆಯ ದಿನಾಂಕ (ಆದೇಶ ಸಂಖ್ಯೆ ಮತ್ತು ದಿನಾಂಕ) | ಎಸ್.ಎಸ್.ಎಲ್.ಸಿ /ಪಿ.ಯು.ಸಿ. ವಿದ್ಯಾರ್ಹತೆ ಪಡೆದ ದಿನಾಂಕ & ವರ್ಷ | ಅಕೌಂಟ್ಸ್ ಲೋಯರ್ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡ ದಿನಾಂಕ | ಇಲಾಖಾ ವಿಚಾರಣೆ/ಶಿಸ್ತು ಕ್ರಮಗಳು ಜಾರಿಯಲ್ಲಿವೆಯೇ? ಅಥವಾ ಇಲ್ಲವೇ? | ಷರಾ |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |
| | | | | | | | | | |

ಜಂಟಿ ನಿರ್ದೇಶಕರು/ಪ್ರಾಂಶುಪಾಲರ ಸಹಿ ಮೊಹರಿನೊಂದಿಗೆ